# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 96

2) ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್)

3) ಉತ್ತರಿಸಬೇಕಾದ ದಿನಾಂಕ: : 15.09.2021

4) ಉತ್ತರಿಸುವವರು : ಮಾನ್ಯ ಸಚಿವರು

| ಕ್ರಮ ಸಂಖ್ಯೆ: | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರದ ಪ್ರಮುಖ ರಸ್ತೆಗಳಾದ ಕೆ.ಆರ್.ಎಸ್. ರಸ್ತೆಯಲ್ಲಿ ಮೇಟಗಳ್ಳಿ ರೈಲ್ವೇ ಲೆವೆಲ್ ಕ್ರಾಸಿಂಗ್ ನಲ್ಲಿ ಸುಗಮ ವಾಹನ ಸಂಚಾರಕ್ಕಾಗಿ ರೈಲ್ವೇ ಮೇಲುಸೇತುವೆ ಅಥವಾ ಕೆಳ ಸೇತುವೆ ಅಥವಾ ಫ್ಲೈಓವರ್ ನಿರ್ಮಿಸುವ ಯೋಜನೆ ಯಾವ ಹಂತದಲ್ಲಿದೆ. | ರೈಲ್ವೆ ಇಲಾಖೆಯಿಂದ ಪಡೆದ ಮಾಹಿತಿಯ ಅನುಸಾರ ಈ ಕಾಮಗಾರಿಯು 2021-22ನೇ ಸಾಲಿನ ಕೇಂದ್ರ ರೈಲ್ವೆ Pink Book ನ ಭಾಗವಾಗಿ ರೈಲ್ವೆ ಇಲಾಖೆಯಿಂದ ಮಂಜೂರಾಗಿರುತ್ತದೆ. ಹಾಗೂ ಸದ್ಯಕ್ಕೆ ಈ ಕಾಮಗಾರಿಯ ಜನರಲ್ ಅರೇಂಜ್‌ಮೆಂಟ್ ಡ್ರಾಯಿಂಗ್ ಅನ್ನು ಲೋಕೋಪಯೋಗಿ ಇಲಾಖೆ/ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ಮೈಸೂರು ಮಹಾನಗರ ಪಾಲಿಕೆಯೊಂದಿಗೆ ಚರ್ಚಿಸಿ ಅಂತಿಮಗೊಳಿಸಲಾಗುತ್ತಿದೆ. |
| ಆ) | ಮೈಸೂರು ನಗರದ ವಿಶ್ವವಿದ್ಯಾನಿಲಯದ ಹಿಂಭಾಗದ ಕುಕ್ಕರಹಳ್ಳಿ ಕೆರೆ ರಸ್ತೆಯಲ್ಲಿ ರೈಲ್ವೇ ಮೇಲುಸೇತುವೆ ಅಥವಾ ಕೆಳಸೇತುವೆಯನ್ನು ನಿರ್ಮಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ; | ರೈಲ್ವೆ ಇಲಾಖೆಯಿಂದ ಪಡೆದ ಮಾಹಿತಿಯ ಅನುಸಾರ ಈ ಕಾಮಗಾರಿಯನ್ನು ರೈಲ್ವೆ ಇಲಾಖೆ ಮತ್ತು ಮೈಸೂರು ಮಹಾನಗರ ಪಾಲಿಕೆಯ ಸಹಯೋಗದೊಂದಿಗೆ ವೆಚ್ಚ ಹಂಚಿಕೆ ಆದಾರದ ಮೇಲೆ ಕೈಗೆತ್ತಿಕೊಳ್ಳಲು ನಿರ್ಧರಿಸಿದ್ದು, ಈ ಸಂಬಂಧ ಸಿದ್ಧಪಡಿಸಿರುವ ಜನರಲ್ ಅರೇಂಜ್‌ಮೆಂಟ್ ಡ್ರಾಯಿಂಗ್ ಅನ್ನು ಮೈಸೂರು ಮಹಾನಗರ ಪಾಲಿಕೆಯಿಂದ ಪರಿಷ್ಕರಿಸಲಾಗುತ್ತಿದೆ. |
| ಇ) | ಈ ಎರಡು ಪ್ರಮುಖ ಯೋಜನೆಗಳ ಬಗ್ಗೆ ರಾಜ್ಯ ಸರ್ಕಾರ ಕೇಂದ್ರ ರೈಲ್ವೇ ಇಲಾಖೆಯ ಜೊತೆ ಪತ್ರ ವ್ಯವಹಾರ ಮಾತುಕತೆ ನಡೆಸಲಾಗಿದೆಯೇ: ಈ ಯೋಜನೆಗಳಿಗೆ ರಾಜ್ಯ ಸರ್ಕಾರದ ಕಡೆಯಿಂದ ಅಗತ್ಯವಾದ ಸಹಕಾರ ಮತ್ತು ನೆರವನ್ನು ನೀಡಲು ಕ್ರಮಕೈಗೊಳ್ಳಲಾಗಿದೆಯೇ? | ಈ ಎರಡೂ ಯೋಜನೆಗಳ ಕುರಿತಂತೆ ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆಯು ಸ್ವೀಕೃತವಾಗಿರುವುದಿಲ್ಲ. |

ಮೂಅಇ 153 ರಾರಾಹೆ 2021/ಇ

**(ವಿ. ಸೋಮಣ್ಣ)**
ವಸತಿ ಮತ್ತು ಮೂಲ ಸೌಲಭ್ಯ
ಅಭಿವೃದ್ಧಿ ಸಚಿವರು